ಮುದ್ದೇಬಿಹಾಳ– ನಾರಾಯಣಪೂರ ರಸ್ತೆ – 20.00 ಲಕ್ಷ

ಮುದ್ದೇಬಿಹಾಳ–ತಂಗಡಗಿ ರಸ್ತೆ – 30.00 ಲಕ್ಷ

(ಇ) ಗಮನಕ್ಕೆ ಬಂದಿದೆ.

(ಈ) ಪ್ರಸಕ್ತ ಸಾಲಿನಲ್ಲಿ ಮುದ್ದೇಬಿಹಾಳ ತಾಲೂಕಿನ ರಸ್ತೆಗಳ ದುರಸ್ತಿಗಾಗಿ (ಚಿಪ್ ಕಾರ್ಪೆಟಿಂಗ್) ಅನುದಾನ ಕಲ್ಪಿಸಲಾಗಿದ್ದು, ಮುದ್ದೇಬಿಹಾಳ– ತಂಗಡಗಿ ರಸ್ತೆಯ ದುರಸ್ತಿ ಕೈಗೆತ್ತಿಕೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿ ಇರುತ್ತದೆ.

ನಂತರ ಬಾಕಿ ಎರಡು ರಸ್ತೆಗಳ ಚಿಪ್ ಕಾರ್ಪೆಟಿಂಗ್ ಮಾಡಿ ಸಂಚಾರಕ್ಕೆ ಉಪಯುಕ್ತಗೊಳಿಸಲು ಅಂದಾಜು ಪತ್ರಿಕೆಗಳನ್ನು ತಯಾರಿಸಲಾಗಿದ್ದು, ಅಧ್ಯಕ್ಷತೆಯ ಮೇರೆಗೆ ಟೆಂಡರ್ ಆಧಾರದ ಮೇಲೆ ಕೈಗೆತ್ತಿಕೊಳ್ಳಲಾಗುವುದು. ದುರಸ್ತಿ ನಂತರ ಲೋಕೋಪಯೋಗಿ ಹಾಗೂ ಕೆ.ಆರ್.ಡಿ.ಸಿ.ಎಲ್. ಇಲಾಖೆಗಳಿಗೆ ಈ ರಸ್ತೆಗಳನ್ನು ಮೇಲ್ದರ್ಜೆಗೊಳಿಸುವ ಸಲುವಾಗಿ ಹಸ್ತಾಂತರಿಸಲಾಗುವುದು.

ಕೃಷಿ ಜಮೀನು ಭೂಸ್ವಾಧೀನ

324 (680) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ:–

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿ ನಿಗಮದಿಂದ ಕೈಗಾರಿಕೆಗಳ ಉದ್ದೇಶಕ್ಕಾಗಿ ಕೃಷಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆಯೇ;

(ಆ) ಸ್ವಾಧೀನಪಡಿಸಿಕೊಂಡಿದ್ದಲ್ಲಿ ವಿಸ್ತೀರ್ಣ ಎಷ್ಟು;

(ಇ) ಭೂಸ್ವಾಧೀನ ಪಡಿಸಿಕೊಂಡಿರುವ ಜಮೀನಿನಲ್ಲಿ ಕೈಗಾರಿಕೆಗಳ ಅಭಿವೃದ್ಧಿಗಾಗಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಈ) ಹಾಗಿದ್ದಲ್ಲಿ, ಕೈಗಾರಿಕೆಗಳಿಗೆ ಈ ಜಮೀನನ್ನು ನೀಡಲಾಗುತ್ತಿದೆಯೇ;

(ಉ) ಭೂಸ್ವಾಧೀನಪಡಿಸಿಕೊಂಡಿರುವ ಕೃಷಿಕರಿಗೆ ಪರಿಹಾರ ಧನ ವಿತರಿಸಲಾಗಿದೆಯೇ?

ಶ್ರೀ ಮುರುಗೇಶ್ ಆರ್ ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

(ಅ) ಹೌದು, ಕೆ.ಐ.ಎ.ಡಿ.ಬಿ. ವತಿಯಿಂದ ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶ ಮತ್ತು ಏಕ ಘಟಕ ಸಂಕೀರ್ಣಗಳಿಗಾಗಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ.

(ಆ) ಕೈಗಾರಿಕಾ ಪ್ರದೇಶಕ್ಕಾಗಿ 16880–08 ½ ಎಕರೆ ಮತ್ತು ಏಕ ಘಟಕ ಸಂಕೀರ್ಣಗಳಿಗಾಗಿ 33805–05 ¼ ಎಕರೆ ಸೇರಿದಂತೆ ಒಟ್ಟು 50735–13 ¾ ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ.

(ಇ) ಉತ್ತರ ಕರ್ನಾಟಕ ಭಾಗದಲ್ಲಿ ಭೂಸ್ವಾಧೀನಪಡಿಸಿಕೊಂಡ ಜಮೀನುಗಳಲ್ಲಿ ಮಂಡಳಿಯು ಒಟ್ಟು 48 ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಿದ್ದು, ಬಹುತೇಕ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ.

(ಈ) ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಮಂಡಳಿಯಿಂದ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ ಜಮೀನು ಹಂಚಿಕೆ ಮಾಡಲಾಗಿರುತ್ತದೆ.

(ಉ) ಹೌದು, ಕೆ.ಐ.ಎ.ಡಿ.ಬಿ. ವತಿಯಿಂದ ಭೂಸ್ವಾಧೀನಪಡಿಸಿಕೊಂಡ ಜಮೀನಿನ ಭೂ ಮಾಲೀಕರಿಗೆ ಪರಿಹಾರ ಧನ ವಿತರಿಸಲಾಗುತ್ತಿದೆ. ಭೂ ಬ್ಯಾಂಕ್ ಯೋಜನೆಯಡಿ ಸ್ವಾಧೀನಪಡಿಸಿಕೊಂಡಿರುವ ಪ್ರಕರಣಗಳಲ್ಲಿ ಭೂ ಪರಿಹಾರ ಧನ ಪಾವತಿಸಬೇಕಾಗಿದೆ.

ರೈತರ ಜಮೀನುಗಳಿಗೆ ನೀರು ಒದಗಿಸುವುದು

326 (682) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ:–

(ಅ) ಆಲಮಟ್ಟಿ ಎಡದಂಡೆ 61ನೇ ಕಾಲುವೆಯ ನೀರನ್ನು ರೈತರು ಜಮೀನುಗಳಿಗೆ ಪೂರೈಕೆ ಮಾಡುವ ಕಾರ್ಯ ಯಶಸ್ವಿಯಾಗಿದೆಯೇ;

(ಆ) ಕಾಲುವೆಯಿಂದ ಉಪ ಕಾಲುವೆಗಳು ಸಂಪೂರ್ಣವಾಗಿ ಹಾಳಾಗಿದ್ದು, ರೈತರ ಜಮೀನುಗಳಿಗೆ ನೀರು ಪೂರೈಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಸರ್ಕಾರದ ಮಾನದಂಡವೇನು;

(ಈ) ಎಂದಿನಿಂದ ದುರಸ್ತಿ ಕಾರ್ಯವನ್ನು ಪ್ರಾರಂಭಿಸಲಾಗಿದೆ (ಪೂರ್ಣ ಮಾಹಿತಿಯನ್ನು ನೀಡುವುದು)?

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು)

(ಅ) ಆಲಮಟ್ಟಿ ಎಡದಂಡೆ ಕಾಲುವೆಯ ಕಿ.ಮೀ. 67.00 ವರೆಗೆ 18,784ಹೆ. ಪ್ರದೇಶಕ್ಕೆ ಕಳೆದ 2005–06ನೇ ಸಾಲಿನಿಂದ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ.

ಕಿಮೀ 61.00 ರವರೆಗೆ 25 ಉಪ ಕಾಲುವೆಗಳ ಮೂಲಕ 17,969ಗೆ, ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ. ಸದರಿ ಕಾಲುವೆಯ ವ್ಯಾಪ್ತಿಯಲ್ಲಿ ಕಿಮೀ.54.00 ರಲ್ಲಿ